# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಯೋಜನೆಗಳಿಗೆ 2018-19ನೇ ಸಾಲಿನಲ್ಲಿ ಒದಗಿಸಿರುವ ಆಯವ್ಯಯದಲ್ಲಿ ಎರಡನೇ ತ್ರೈಮಾಸಿಕ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 257 ಎಂಡಿಎಸ್ 2018, ದಿನಾಂಕ:06.04.2018.

2) ಸರ್ಕಾರಿ ಆದೇಶ ಸಂಖ್ಯೆ:ಎಂಡಬ್ಲ್ಯೂಡಿ 257 ಎಂಡಿಎಸ್ 2018, ದಿನಾಂಕ:11.04.2018

3) ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರ ಪತ್ರ ಸಂಖ್ಯೆ: ಅಸಂನಿ/ಆ.ವ್ಯ/ಬಿಡುಗಡೆ/ಸಿಆರ್-10/2018-19, ದಿನಾಂಕ:12.07.2018

4) ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಬೆಂಗಳೂರು ಇವರ ಪತ್ರ ಸಂಖ್ಯೆ: ಕೆಎಸ್‌ಬಿಡಬ್ಲ್ಯೂ /ಎಸಿಟಿಎಸ್ /ಯುಸಿ/ 04/2018-19, ದಿನಾಂಕ:25.07.2018

5) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಬೆಂಗಳೂರು ಇವರ ಪತ್ರ ಸಂಖ್ಯೆ: ಕಅಅನಿ/ಸಿಬ್ಬಂದಿ/2018-19 /1111, ದಿನಾಂಕ:19.07.2018

6) ನಿಬಂಧಕರು, ಕರ್ನಾಟಕ ಉರ್ದು ಅಕಾಡೆಮಿ ಇವರ ಪತ್ರ ಸಂಖ್ಯೆ:ಕಉಅ/ಅಕಾಡೆಮಿ/ಅನುದಾನ/2018-19/103, ದಿನಾಂಕ:20.07.2018

## ಪ್ರಸ್ತಾವನೆ:

ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯಲ್ಲಿ 2017-18ನೇ ಸಾಲಿನಲ್ಲಿ ಚಾಲ್ತಿಯಲ್ಲಿದ್ದ ಯೋಜನಾ ಕಾರ್ಯಕ್ರಮಗಳನ್ನು 2018-19ನೇ ಸಾಲಿನವರೆಗೆ ಮುಂದುವರೆಸಿ ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಸರ್ಕಾರದ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಮೊದಲನೇ ತ್ರೈಮಾಸಿಕ ಕಂತಿನ ಅನುದಾನ ಶೇ.33.33%ರಷ್ಟು ಬಿಡುಗಡೆ ಮಾಡಿ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಿಂದ (6)ರಲ್ಲಿ ಎರಡನೇ ತ್ರೈಮಾಸಿಕ ಕಂತಿನ ಶೇ.25%ರಷ್ಟು ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಲಾಗಿದ್ದು, ಹಾಗೂ ಮೊದಲನೇ ಕಂತಿನ ಅನುದಾನವನ್ನು ಉಪಯೋಗಿಸಿಕೊಂಡಿರುವ ಬಗ್ಗೆ ಉಪಯೋಗಿತ ಪ್ರಮಾಣ ಪತ್ರದೊಂದಿಗೆ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ; ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ;, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ;, ನಿಬಂಧಕರು, ಕರ್ನಾಟಕ ಉರ್ದು ಅಕಾಡೆಮಿ ಇವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಈ ಪ್ರಸ್ತಾವನೆಯನ್ನು 2018-19ನೇ ಸಾಲಿನ ಆರ್ಥಿಕ ವರ್ಷದಲ್ಲಿ ಒದಗಿಸಲಾಗಿರುವ ಆಯವ್ಯಯದ ಅನುದಾನದಲ್ಲಿ ಎರಡನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ ಪರಿಶೀಲಿಸಲಾಗಿದ್ದು ಈ ಕೆಳಕಂಡಂತೆ ಆದೇಶಿಸಿದೆ.



D/SHRI/2018-19/SULT/K.G.O/CONTINUOUS AND INST